# ಕರ್ನಾಟಕ ಸರ್ಕಾರದ ನಡವಳಿಗಳು

**ವಿಷಯ:-** ಶಿವಮೊಗ್ಗ ಕೃಷಿ ಮತ್ತು ತೋಟಗಾರಿಕಾ ವಿಶ್ವವಿದ್ಯಾಲಯಕ್ಕೆ 2013-14ನೇ ಸಾಲಿನಲ್ಲಿ 3ನೇ ತ್ರೈಮಾಸಿಕ ಯೋಜನೇತರ ಅನುದಾನವನ್ನು ಬಿಡುಗಡೆ ಮಾಡುವ ಬಗ್ಗೆ.

**ಓದಲಾಗಿದೆ:-** 1) ಹಣಕಾಸು ನಿಯಂತ್ರಣಾಧಿಕಾರಿಗಳು, ಕೃಷಿ ಮತ್ತು ತೋಟಗಾರಿಕೆ ವಿಶ್ವವಿದ್ಯಾಲಯ, ಶಿವಮೊಗ್ಗ ಇವರ ದಿನಾಂಕ: 11-10-2013ರ ಪತ್ರ ಸಂಖ್ಯೆ: ಹನಿಅ/ ಕೃತೋವಿವಿಶಿ/359/2013-14.

**** *** ****

**ಪ್ರಸ್ತಾವನೆ:-**

ಶಿವಮೊಗ್ಗ ಕೃಷಿ ಮತ್ತು ತೋಟಗಾರಿಕೆ ವಿಶ್ವವಿದ್ಯಾಲಯಕ್ಕೆ ಯೋಜನೇತರ ಉದ್ದೇಶಕ್ಕಾಗಿ ಸರ್ಕಾರವು 2013-14ನೇ ಸಾಲಿನ ಪರಿಷ್ಕೃತ ಆಯವ್ಯಯಲ್ಲಿ ರೂ. 3258.00 ಲಕ್ಷಗಳನ್ನು ಸಹಾಯಾನುದಾನ-ವೇತನಗಳು ಉದ್ದೇಶಕ್ಕಾಗಿ ಲೆಕ್ಕಶೀರ್ಷಿಕೆ 2415-80-277-05-01-101ರಡಿಯಲ್ಲಿ ಹಂಚಿಕೆ ಮಾಡಿದೆ. ಈ ಸಂಬಂಧ ಶಿವಮೊಗ್ಗ ಕೃಷಿ ಮತ್ತು ತೋಟಗಾರಿಕೆ ವಿಶ್ವವಿದ್ಯಾಲಯಲಕ್ಕೆ ಮೂರನೇ ತ್ರೈಮಾಸಿಕ ಯೋಜನೇತರ ಅನುದಾನವಾಗಿ ರೂ. 814.50 ಲಕ್ಷಗಳನ್ನು ಮಂಜೂರು ಮಾಡಿ ಬಿಡುಗಡೆಗೊಳಿಸುವಂತೆ ಹಣಕಾಸು ನಿಯಂತ್ರಣಾಧಿಕಾರಿಗಳು, ಕೃಷಿ ಮತ್ತು ತೋಟಗಾರಿಕೆ ವಿಶ್ವವಿದ್ಯಾಲಯ, ನವಿಲೆ, ಶಿವಮೊಗ್ಗ ರವರು ಮೇಲೆ ಓದಲಾದ(1)ರ ದಿನಾಂಕ: 11-10-2013ರ ಪತ್ರದಲ್ಲಿ ಕೋರಿರುತ್ತಾರೆ.

ಪ್ರಸ್ತಾವನೆಯನ್ನು ಸರ್ಕಾರದ ಮಟ್ಟದಲ್ಲಿ ಪರಿಶೀಲಿಸಿ ಈ ಕೆಳಕಂಡಂತೆ ಆದೇಶಿಸಿದೆ.

**ಸರ್ಕಾರದ ಆದೇಶ ಸಂಖ್ಯೆ: ಕೃಇ 20 ಕೃವಿಶಿ 2013, ಬೆಂಗಳೂರು, ದಿನಾಂಕ: 19-11-2013**

ಕೃಷಿ ಮತ್ತು ತೋಟಗಾರಿಕೆ ವಿಶ್ವವಿದ್ಯಾಲಯ, ಶಿವಮೊಗ್ಗಕ್ಕೆ 2013-14ನೇ ಸಾಲಿನ ಪರಿಷ್ಕೃತ ಆಯವ್ಯಯದಲ್ಲಿ ನಿಗದಿಯಾಗಿರುವ ಯೋಜನೇತರ ಅನುದಾನ ರೂ. 3258.00 ಲಕ್ಷಗಳಲ್ಲಿ ರೂ. 814.50 (ರೂ. ಎಂಟು ನೂರ ಹದಿನಾಲ್ಕು ಲಕ್ಷದ ಐವತ್ತು ಸಾವಿರಗಳು ಮಾತ್ರ) ಲಕ್ಷಗಳನ್ನು ಲೆಕ್ಕ ಶೀರ್ಷಿಕೆ-2415-80-277-05-01-101ರಡಿ ಮೂರನೇ ತ್ರೈಮಾಸಿಕ ಅನುದಾನವಾಗಿ ವೇತನ ಮತ್ತು ಇತರ ಭತ್ಯೆಗಳನ್ನು ಭರಿಸಲು ಈ ಕೆಳಕಂಡ ಷರತ್ತುಗಳಿಗೊಳಪಟ್ಟು ಬಿಡುಗಡೆ ಮಾಡಲಾಗಿದೆ.

- ಪ್ರತಿ ತ್ರೈಮಾಸಿಕ ಅನುದಾನವನ್ನು ಆಯಾ ತ್ರೈಮಾಸಿಕದ ಬಳಕೆ ಪ್ರಮಾಣ ಪತ್ರವನ್ನು ಒದಗಿಸಿ ಬಿಲ್ಲಿಗೆ ಮೇಲು ರುಜು ಪಡೆಯತಕ್ಕದ್ದು.

- ಸರ್ಕಾರವು ಯಾವ ಉದ್ದೇಶಕ್ಕಾಗಿ ಅನುದಾನ ಬಿಡುಗಡೆ ಮಾಡುವುದೋ ಅದೇ ಉದ್ದೇಶಕ್ಕಾಗಿ ಅನುದಾನವನ್ನು ಉಪಯೋಗಿಸತಕ್ಕದ್ದು.
- ಸರ್ಕಾರವು ನೀಡಿದ ಸೂಚನೆ ಆದೇಶಗಳನುಸಾರ ಕೃಷಿ ವಿಶ್ವವಿದ್ಯಾಲಯದವರು ವೆಚ್ಚದಲ್ಲಿ ಕಟ್ಟುನಿಟ್ಟಾಗಿ ಮಿತವ್ಯಯವನ್ನು ಪಾಲಿಸತಕ್ಕದ್ದು.
- ಬಿಡುಗಡೆಯಾಗಿರುವ ಅನುದಾನದ ಬಗ್ಗೆ ಸೂಕ್ತ ಸಮಯದಲ್ಲಿ ಮಹಾಲೇಖಪಾಲರ ಲೆಕ್ಕಗಳೊಂದಿಗೆ ಹೊಂದಾಣಿಕೆ ಮಾಡಿಕೊಳ್ಳತಕ್ಕದ್ದು.
- ಬಿಡುಗಡೆ ಮಾಡಲಾಗಿರುವ ಅನುದಾನವು ಆರ್ಥಿಕ ಪರಿಸ್ಥಿತಿಯನ್ನು ಅನುಸರಿಸಿ ಆರ್ಥಿಕ ಇಲಾಖೆಯು ನೀಡಬಹುದಾದ ಸೂಚನೆಗಳಿಗೆ ಒಳಪಟ್ಟಿರುತ್ತದೆ.
- ಆಯಾ ತಿಂಗಳಿಗೆ ಪ್ರತ್ಯೇಕ ಬಿಲ್ಲನ್ನು ಒದಗಿಸುವುದು.

2. ಬಿಡುಗಡೆಯಾಗಿರುವ ಅನುದಾನಕ್ಕೆ ಹಣಕಾಸು ನಿಯಂತ್ರಣಾಧಿಕಾರಿಗಳು, ಕೃಷಿ ಮತ್ತು ತೋಟಗಾರಿಕೆ ವಿಶ್ವವಿದ್ಯಾಲಯ, ಶಿವಮೊಗ್ಗ, ಇವರು ಸಲ್ಲಿಸುವ ಬಿಲ್ಲಿಗೆ ಮೇಲು ರುಜು ಮಾಡುವ ಅಧಿಕಾರವನ್ನು ಜಂಟಿ ಕೃಷಿ ನಿರ್ದೇಶಕರು, ಕೃಷಿ ಇಲಾಖೆ, ಶಿವಮೊಗ್ಗ, ಇವರಿಗೆ ನೀಡಲಾಗಿದೆ.

3. ಆರ್ಥಿಕ ಇಲಾಖೆಯ ಆದೇಶ ಸಂಖ್ಯೆ: ಎಫ್‌ಡಿ 1 ಟಿಎಫ್‌ಪಿ 2013, ದಿನಾಂಕ: 10-05-2013ರಲ್ಲಿ ಆಡಳಿತಾತ್ಮಕ ಇಲಾಖಾ ಕಾರ್ಯದರ್ಶಿಗಳಿಗೆ ಪ್ರತ್ಯಾಯೋಜಿಸಲಾದ ಆರ್ಥಿಕ ಅಧಿಕಾರದ ಮೇರೆಗೆ ಈ ಆದೇಶವನ್ನು ಹೊರಡಿಸಲಾಗಿದೆ.

**ಕರ್ನಾಟಕ ರಾಜ್ಯಪಾಲರ ಆಜ್ಞಾನುಸಾರ**
**ಮತ್ತು ಅವರ ಹೆಸರಿನಲ್ಲಿ**

**(ಮಂಜುನಾಥ್ ಪಾಟೀಲ್)**
**ಸರ್ಕಾರದ ಅಧೀನ ಕಾರ್ಯದರ್ಶಿ**
**ಕೃಷಿ ಇಲಾಖೆ (ಸೇವೆಗಳು)**
**(ದೂರವಾಣಿ 080-2203 2344)**

**ಇವರಿಗೆ:-**

ಸಂಕಲನಕಾರರು, ಕರ್ನಾಟಕ ರಾಜ್ಯ ಪತ್ರ ಬೆಂಗಳೂರು – ಮುಂದಿನ ಸಂಚಿಕೆಯಲ್ಲಿ ಪ್ರಕಟಿಸಿ, ಪ್ರಕಟಿತ 15 ಪ್ರತಿಗಳನ್ನು ಒದಗಿಸಲು.

**ಪ್ರತಿ:-**

1. ಮಹಾಲೇಖಪಾಲರು, ಕರ್ನಾಟಕ, (ಲೆಕ್ಕಪತ್ರ/ತನಿಖೆ) ಬೆಂಗಳೂರು.
2. ವಿಶೇಷಾಧಿಕಾರಿಗಳು, ಕೃಷಿ ಮತ್ತು ತೋಟಗಾರಿಕೆ ವಿಶ್ವವಿದ್ಯಾಲಯ, ಶಿವಮೊಗ್ಗ.